# ಬಾವಲಿ ಜ್ವರ ವಹಿಸೋಣ ಎಚ್ಚರ



ಬಾವಲಿ ಜ್ವರ 'ನಿಫಾ ವೈರಸ್' ಮೂಲಕ ನೆರೆಯ ಕೇರಳದ ಜನರನ್ನು ಬಾಧಿಸುತ್ತಿದೆ. ವೈರಾಣು ವೇಗವಾಗಿ ಹರಡುವ ಮೂಲಕ ನಮ್ಮ ರಾಜ್ಯದಲ್ಲಿಯೂ ಜನ ಆತಂಕಕ್ಕೊಳಗಾಗಿದ್ದಾರೆ. ಈಗ ಸೂಕ್ತ ಮುನ್ನೆಚ್ಚರಿಕೆ ವಹಿಸಬೇಕಾದ ಅನಿವಾರ್ಯತೆ ಇದ್ದು, ಜ್ವರ ಕಾಣಿಸಿಕೊಂಡ ತಕ್ಷಣ ತಜ್ಞ ವೈದ್ಯರನ್ನು ಕಾಣಬೇಕಾಗಿದೆ.

■ ಡಾ. ಮುರಲೀ ಮೋಹನ್ ಚೂಂತಾರು

ಆರೋಗ್ಯ ಕ್ಷೇತ್ರದಲ್ಲಿ ಇದೀಗ ಸುದ್ದಿಯಲ್ಲಿರುವುದು ಬಾವಲಿ ಜ್ವರ. ನೆರೆಯ ಕೇರಳಕ್ಕೆ ಬಾವಲಿ ಜ್ವರ ಬಾಧಿಸಿ ಜನ ಮೃತಪಡುತ್ತಿರುವ ಬಗ್ಗೆ ಪತ್ರಿಕೆಗಳಲ್ಲಿ ವರದಿಯಾಗುತ್ತಲೇ ಇದೆ. ಇತ್ತ ಕರ್ನಾಟಕದಲ್ಲೂ ವೈರಸ್ ಹರಡುವ ಭೀತಿ ಜನರನ್ನು ಕಾಡುತ್ತಿದೆ. ನಿಫಾ ವೈರಸ್ ಹೆಸರಿನ ಈ ವೈರಾಣು ಹರಡುವ ಮುನ್ನವೇ ಎಚ್ಚರ ವಹಿಸುವುದು ಒಳಿತು ಎನ್ನುತ್ತಾರೆ ಆರೋಗ್ಯ ತಜ್ಞರು.

ನಿಫಾ ವೈರಸ್, ಆರ್.ಯನ್.ಎ ಗುಂಪಿಗೆ ಸೇರಿದ ಪಾರಾಮಿಕ್ಸೊ ವೈರಾಣು ಪ್ರಬೇಧಕ್ಕೆ ಸೇರಿದ ವೈರಾಣು. ನಿಫಾ ವೈರಾಣುಗಳು ಬಾವಲಿಗಳ ಮುಖಾಂತರ ಮನುಷ್ಯನಿಗೆ ಹರಡುವ ಕಾರಣದಿಂದಲೇ ಈ ವೈರಾಣು ಜ್ವರಕ್ಕೆ 'ಬಾವಲಿ ಜ್ವರ' ಎಂಬ ಹೆಸರು ಬಂದಿದೆ.

## ರೋಗದ ಲಕ್ಷಣಗಳು

ಎಲ್ಲಾ ವೈರಾಣು ಜ್ವರಗಳಲ್ಲಿ ಇರುವಂತೆ ಈ ಜ್ವರದಲ್ಲಿಯೂ ತೀವ್ರತರವಾದ ಜ್ವರ, ವಿಪರೀತ ತಲೆನೋವು, ವಾಂತಿ, ತಲೆಸುತ್ತು, ಮೈಕೈ ನೋವು ಇರುತ್ತದೆ. ರೋಗದ ತೀವ್ರತೆ ಜಾಸ್ತಿಯಾದಾಗ ಪ್ರಜ್ಞಾಹೀನತೆ ಮತ್ತು ಅಪಸ್ಮಾರದ ಅನುಭವ ಊಂಟಾಗುತ್ತದೆ. ಸುಮಾರು 6ರಿಂದ 12 ದಿವಸಗಳ ಕಾಲ ಈ ರೋಗದ ಲಕ್ಷಣ ಇರುತ್ತದೆ. ಕೊನೆ ಹಂತದಲ್ಲಿ ತಲೆ, ಮೆದುಳಿಗೂ ಹರಡುತ್ತದೆ ಮತ್ತು ಹೃದಯದ ಸ್ನಾಯುಗಳಿಗೆ ಹರಡಿ ಸ್ನಾಯುಗಳನ್ನು ಹಾಳುಗೆಡುವುತ್ತದೆ. ಮೆದುಳಿನ ಉರಿಯೂತ ಉಂಟಾಗುತ್ತದೆ. ವೈರಾಣು ದೇಹಕ್ಕೆ ಸೇರಿದ ಬಳಿಕ 5 ರಿಂದ 14 ದಿನಗಳ ಮೇಲೆ ರೋಗದ ಲಕ್ಷಣಗಳು ಕಾಣಿಸಿಕೊಳ್ಳಬಹುದು. ಸಕಾಲದಲ್ಲಿ ಸೂಕ್ತ ಚಿಕಿತ್ಸೆ ತೆಗೆದುಕೊಳ್ಳದಿದ್ದಲ್ಲಿ ಜ್ವರದ ತೀವ್ರತೆ ಜಾಸ್ತಿಯಾಗಿ 24 ರಿಂದ 48 ಗಂಟೆಗಳ ಒಳಗೆ ಕೋಮವಾಸ್ಥೆಗೆ ತಲುಪಬಹುದು. ಜ್ವರದ ತೀವ್ರತೆ ಜಾಸ್ತಿಯಾದಂತೆಲ್ಲ ವ್ಯಕ್ತಿ ತಾನು ಎಲ್ಲಿದ್ದೇನೆ, ಏನು ಮಾಡುತ್ತಿದ್ದೇನೆ ಎನ್ನುವುದರ ಪರಿವೇ ಇಲ್ಲದಾಗಿ ವಾಸಸ್ಥಳ ಮತ್ತು ವ್ಯಕ್ತಿಯನ್ನು ಗುರುತು ಹಿಡಿಯದಿರಲೂ ಬಹುದು. ಅಲ್ಲದೆ ಮತಿ ಭ್ರಮಣೆಗೊಳಗಾದಂತೆ ವರ್ತಿಸಲೂಬಹುದು. ಸಾಮಾನ್ಯ ಜ್ವರ ಎಂದು ಕಡೆಗಣಿಸಿದ್ದಲ್ಲಿ ಜೀವಕ್ಕೇ ಕುತ್ತು ತರುವ ಅಪಾಯ ಇದೆ. ಆದರೆ ಭಯ, ಆತಂಕ ಬೇಡ. ಬದಲಿಗೆ ಎಚ್ಚರ ವಹಿಸೋಣ.

## ರೋಗ ಹೀಗೆ ಹರಡುತ್ತದೆ..

* ರೋಗ ಸೋಂಕಿತ ವ್ಯಕ್ತಿಯ ದೈಹಿಕ ಸಂಪರ್ಕ, ಸ್ಪರ್ಶದಿಂದ ವೈರಾಣು ಹರಡುತ್ತದೆ.
* ವೈರಾಣು ಹೊಂದಿರುವ ಬಾವಲಿಗಳು ಸ್ಪರ್ಶಿಸಿದ ಹಣ್ಣು ಹಂಪಲಿನಿಂದಲೂ ಹರಡುತ್ತದೆ.
* ವೈರಾಣು ಸೋಂಕಿತ ಹಂದಿಯಿಂದಲೂ ವೈರಾಣು ಹರಡುತ್ತದೆ.
* ಬಾವಲಿ ತಿಂದ ಹಣ್ಣುಗಳನ್ನು ಹಂದಿ ಮತ್ತು ಕುದುರೆ ತಿಂದಾಗ ವೈರಾಣು ಅವುಗಳಿಗೆ ಹರಡುತ್ತದೆ. ಹಂದಿ ಮಾಂಸ ಸೇವನೆ ಅಥವಾ ಸೋಂಕು ತಗಲಿರುವ ಹಂದಿ, ಕುದುರೆಗಳ ಸಾಕಾಣಿಕೆಯಿಂದಲೂ ಮನುಷ್ಯನಿಗೆ ವೈರಾಣು ಹರಡುತ್ತದೆ.

